ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE 2/6/2020

# ರಾಜ್ಯದಲ್ಲಿ ನಾಲ್ಕು ರಾಜ್ಯಸಭೆ ಸ್ಥಾನಕ್ಕೆ 19ರಂದು ಎಲೆಕ್ಷನ್

ನವದೆಹಲಿ: ಬಿಜೆಪಿಯ ಪ್ರಭಾಕರ ಕೋರೆ, ಕಾಂಗ್ರೆಸ್ಸಿನ ರಾಜೀವ್ ಗೌಡ, ಹರಿಪ್ರಸಾದ್ ಹಾಗೂ ಜೆಡಿಎಸ್‌ನ ಕುಪೇಂದ್ರ ರೆಡ್ಡಿ ಅವರಿಂದ ತೆರವಾಗಲಿರುವ ರಾಜ್ಯಸಭೆಯ 4 ಸ್ಥಾನಗಳಿಗೆ ಜೂ.19ರಂದು ಚುನಾವಣೆ ನಡೆಯಲಿದೆ. ನಾಮಪತ್ರ ಸಲ್ಲಿಕೆಗೆ ಜೂ.9 ಕೊನೆಯ ದಿನ. ಜೂ.10ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂಪಡೆಯಲು ಜೂ.12 ಕೊನೆಯ ದಿನ. ಜೂ.19ರ ಶುಕ್ರವಾರ ಬೆಳಗ್ಗೆ 9ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದೆ. ಅಂದು ಸಂಜೆ 5 ಗಂಟೆಗೆ ಮತಗಳ ಎಣಿಕೆ ನಡೆಯಲಿದೆ. ಕರ್ನಾಟಕದ ನಾಲ್ವರೂ ರಾಜ್ಯಸಭಾ ಸದಸ್ಯರ ಅವಧಿ ಜೂ.25ರಂದು ಮುಗಿಯಲಿದೆ.